ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಮಸಾಸಂಇ : ಉ ನಿ : ಸುಮಪ : 2019–20 : ದಿನಾಂಕ: 16–11–2019

# ಪತ್ರಿಕಾ ಪ್ರಕಟಣೆ

## ಬೆಂಗಳೂರು ವಿಶ್ವವಿದ್ಯಾನಿಲಯದಲ್ಲಿ ಸದ್ಯದಲ್ಲಿಯೇ ಸಮೂಹ ಮಾಧ್ಯಮದ ವಿಭಾಗ : ಡಾ ಕೆ ಆರ್ ವೇಣುಗೋಪಾಲ್

ಬೆಂಗಳೂರು, ನವೆಂಬರ್ 16 (ಕರ್ನಾಟಕ ವಾರ್ತೆ) :

ಬೆಂಗಳೂರು ವಿಶ್ವವಿದ್ಯಾನಿಲಯದಲ್ಲಿ ಪ್ರಸ್ತುತ ಲಭ್ಯವಿರುವ ಸಂವಹನ ಮತ್ತು ಪತ್ರಿಕೋದ್ಯಮ (ಕಮ್ಯುನಿಕೇಷನ್ ಅಂಡ್ ಜರ್ನಲಿಸಂ) ಮತ್ತು ವಿದ್ಯುನ್ಮಾನ ಮಾಧ್ಯಮ (ಎಲೆಕ್ಟ್ರಾನಿಕ್ ಮೀಡಿಯಾ) ವಿಷಯಗಳ ಜೊತೆ ಜೊತೆಗೆ ಮಾಧ್ಯಮ ಅಧ್ಯಯನ (ಮೀಡಿಯಾ ಸ್ಟಡೀಸ್) ಚಲನಚಿತ್ರ ನಿರ್ಮಾಣ, (ಫಿಲಂ ಮೇಕಿಂಗ್), ಆರೋಗ್ಯ ಮತ್ತು ವೈದ್ಯಕೀಯ ಸಂವಹನ (ಹೆಲ್ತ್ ಅಂಡ್ ಮೆಡಿಕಲ್ ಕಮ್ಯೂನಿಕೇಷನ್), ಜಾಹೀರಾತು ಮತ್ತು ಸಾರ್ವಜನಿಕ ಸಂಪರ್ಕ (ಅಡ್ವರ್ಟೈಸಿಂಗ್ ಅಂಡ್ ಪಬ್ಲಿಕ್ ರಿಲೇಷನ್ಸ್), ದತ್ತಾಂಶ ವಿಶ್ಲೇಷಣೆ ಮತ್ತು ತದ್ರೂಪಿ ಬರವಣಿಗೆ (ಡಾಟಾ ಅನಾಲಿಸಿಸ್ ಅಂಡ್ ಕಾಫಿ ರೈಟಿಂಗ್) ಹಾಗೂ ಚಿತ್ರ ಸಂಚಲನ ಮತ್ತು ಚಿತ್ರ ವರ್ಧಕ ಅನಿಮೇಷನ್ ಮತ್ತು ಗ್ರಾಫಿಕ್ಸ್ ಒಳಗೊಂಡಂತೆ ಸಮೂಹ ಮಾಧ್ಯಮದ ವಿಭಾಗವನ್ನು (ಫ್ಯಾಕಲ್ಟಿ ಆಫ್ ಮಾಸ್ ಮೀಡಿಯಾ) ಸದ್ಯದಲ್ಲಿಯೇ ಪ್ರಾರಂಭಿಸಲು ಸಂಪೂರ್ಣ ಸಿದ್ದತೆ ನಡೆದಿದೆ ಎಂದು ಬೆಂಗಳೂರು ವಿಶ್ವವಿದ್ಯಾನಿಲಯದ ಕುಲಪತಿ ಡಾ ಕೆ. ಆರ್. ವೇಣುಗೋಪಾಲ್ ಅವರು ಇಲ್ಲಿ ಇಂದು ಪ್ರಕಟಿಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಬೆಂಗಳೂರು ವಿಶ್ವವಿದ್ಯಾಲಯದ ಸಂವಹನ ಮತ್ತು ಪತ್ರಿಕೋದ್ಯಮ ಹಾಗೂ ವಿದ್ಯುನ್ಮಾನ ಮಾಧ್ಯಮ ವಿಭಾಗದ ಸಹಯೋಗದೊಂದಿಗೆ ಕರ್ನಾಟಕ ಮಾಧ್ಯಮ ಅಕಾಡೆಮಿಯು ರಾಷ್ಟ್ರೀಯ ಪತ್ರಿಕಾ ದಿನಾಚರಣೆ ಅಂಗವಾಗಿ ವರದಿಗಾರಿಕೆ : ಮಾಧ್ಯಮಗಳ ಜಗತ್ತಿನೊಳಗೊಂದು ಪಯಣ" ಕುರಿತು ಜ್ಞಾನಭಾರತಿಯ ಪ್ರೊ: ಕೆ. ವೆಂಕಟಗಿರಿಗೌಡ ಸಭಾಂಗಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ವಿಶ್ವವಿದ್ಯಾಲಯದ ಆವರಣದಲ್ಲಿ ಸಮೂಹ ಮಾಧ್ಯಮದ ವಿಭಾಗದ ಸ್ಥಾಪನೆಗಾಗಿ ಹತ್ತು ಎಕರೆ ಜಮೀನು ಗುರುತಿಸಿದ್ದು ಐದು ಕೋಟಿ ರೂಪಾಯಿಗಳನ್ನು ಮೀಸಲಿರಿಸಲಾಗಿದೆ ಎಂದು ಅವರು ತಿಳಿಸಿದರು.

ಪ್ರಜಾಪ್ರಭುತ್ವದ ಪ್ರಮುಖ ಅಂಗಗಳೆನಿಸಿರುವ ಶಾಸಕಾಂಗ, ಕಾರ್ಯಾಂಗ ಮತ್ತು ನ್ಯಾಯಾಂಗಗಳು ಕಾರ್ಯ ನಿರ್ವಹಿಸದಿದ್ದರೂ, ಸಮಾಜವು ಬದುಕುಳಿಯಲಿದೆ. ಆದರೆ, ಪ್ರಜಾಪ್ರಭುತ್ವದಲ್ಲಿ ನಾಲ್ಕನೇ ಅಂಗ ಎಂದು ಕರೆಯಲ್ಪಡುವ ಮಾಧ್ಯಮ ರಂಗ ಸಕ್ರೀಯವಾಗಿ ಕಾರ್ಯನಿರ್ವಹಿಸದಿದ್ದಲ್ಲಿ ಪ್ರಜಾಪ್ರಭುತ್ವದ ಅಸ್ತಿತ್ವವೇ ಕುಸಿಯುವುದು ಖಚಿತ ಎಂದು ಡಾ : ವೇಣುಗೋಪಾಲ್ ಅವರು ಅಭಿಪ್ರಾಯಪಟ್ಟರು.

ಮಾಧ್ಯಮಗಳಲ್ಲಿ ಪ್ರಕಟಗೊಳ್ಳುವ ಹಾಗೂ ಬಿತ್ತರಗೊಳ್ಳುವ ಸುದ್ದಿಗಳಲ್ಲಿ ಅಭಿಪ್ರಾಯಗಳು ನುಸುಳಬಾರದು. ಅಂತೆಯೇ, ಮಾಧ್ಯಮಗಳಲ್ಲಿ ಹೊರಹೊಮ್ಮುವ ಸುದ್ದಿಗಳು ಸತ್ಯ ಮತ್ತು ಪ್ರಾಮಾಣಿಕತೆಯ ಚೌಕಟ್ಟಿನೊಳಗಿರಬೇಕು ಎಂದು ಅವರು ಹಿತನುಡಿದರು.

ಶಿಕ್ಷಣ ಮತ್ತು ಉದ್ಯಮದ ನಡುವೆ ಇರುವ ಅಂತರ ಕಡಿಮೆಗೊಳಿಸಲು ಪ್ರಯತ್ನ

ಬೆಂಗಳೂರು ವಿಶ್ವವಿದ್ಯಾಲಯದ ಕುಲ ಸಚಿವ ಡಾ: ಬಿ. ಕೆ. ರವಿ ಅವರು ಮಾತನಾಡಿ ಮಾಧ್ಯಮ ಶಿಕ್ಷಣ ಹಾಗೂ ಮಾಧ್ಯಮ ಉದ್ಯಮದ ಬೇಡಿಕೆಗಳ ನಡುವೆ ಪಸ್ತುತ ಇರುವ ಅಂತರವನ್ನು ಕಡಿಮೆಗೊಳಿಸಲು ವಿಶ್ವವಿದ್ಯಾಲಯದಲ್ಲಿ ಪಠ್ಯಗಳ ಪರಿಷ್ಕರಣೆ ಒಳಗೊಂಡಂತೆ ಎಲ್ಲಾ ರೀತಿಯ ಪ್ರಯತ್ನಗಳೂ ನಡೆಯುತ್ತಿವೆ ಎಂದರಲ್ಲದೆ ಸಂಶೋಧನೆಗೂ ಒತ್ತು ನೀಡಲಾಗುತ್ತಿದೆ ಎಂದು ಹೇಳಿದರು.

ಪಕ್ಷಪಾತ ಧೋರಣೆ ಹೊತ್ತರೂ ಪರವಾಗಿಲ್ಲ, ಸಾರ್ವಜನಿಕ ಹಿತಕ್ಕೆ ಪೂರಕ ಬರವಣಿಗೆ ಇರಲಿ !

ಇದೇ ಸಂದರ್ಭದಲ್ಲಿ ವರದಿಗಾರಿಕೆ : ಮಾಧ್ಯಮಗಳ ಜಗತ್ತಿನೊಳಗೊಂದು ಪಯಣ" ಕುರಿತು ಪ್ರಧಾನ ಭಾಷಣ ಮಾಡಿದ ಕನ್ನಡ ಪ್ರಭ ಹಾಗೂ ಸುವರ್ಣ ನ್ಯೂಸ್ 24/7 ನ ಪ್ರಧಾನ ಸಂಪಾದಕ ರವಿ ಹೆಗಡೆ ಅವರು ಪತ್ರಕರ್ತ ತನ್ನ ಬರವಣಿಗೆಯಲ್ಲಿ ಒಂದು ಘಟನೆ ಅಥವಾ ಒಂದು ವಿಷಯ ಕುರಿತಂತೆ ಹೊರಹೊಮ್ಮುವ ಪರ ಮತ್ತು ವಿರೋಧ ಅಭಿಪ್ರಾಯಗಳಲ್ಲಿ ಸಮತೋಲನವನ್ನು ಕಾಯ್ದುಕೊಂಡು ವರದಿ ಮಾಡಬೇಕೆಂಬ ಹಿಂದಿನ ಕಾಲದ ತತ್ವಕ್ಕೆ ಇದೀಗ ವಿದಾಯ ಹೇಳಬೇಕಾದ ಕಾಲಬಂದಿದೆ. ಪತ್ರಕರ್ತ ತನ್ನ ವರದಿಗಾರಿಕೆಯಲ್ಲಿ ಪಕ್ಷಪಾತ ಧೋರಣೆ ಹೊತ್ತರೂ ಪರವಾಗಿಲ್ಲ, ಸಾರ್ವಜನಿಕ ಹಿತಕ್ಕೆ ಪೂರಕವಾಗಿ, ಅದರಲ್ಲೂ ವಿಶೇಷವಾಗಿ ಸತ್ಯಕ್ಕೆ ಸನ್ನಿಹಿತವಾಗಿ ಬರವಣಿಗೆ ಇರಬೇಕು ಎಂದು ಕಾರ್ಯಕ್ರಮದಲ್ಲಿ ಹಾಜರಿದ್ದ ಭಾವೀ ಪತ್ರಕರ್ತರ ಸಮೂಹಕ್ಕೆ ಕಿವಿಮಾತು ಹೇಳಿದರು.

ಯಾಂತ್ರಿಕ ಕಲಿಕೆ ( ಮಷೀನ್ ಲರ್ನಿಂಗ್ ) ಮತ್ತು ಕೃತಕ ಬುದ್ಧಿಮತ್ತೆ ( ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ ) ಯ ಈ ಕಾಲದಲ್ಲಿ ಮೈಕ್ ಹಿಡಿದು ಒಂದು ಪ್ರಶ್ನೆ ಕೇಳಿ ತಾಸು ಗಟ್ಟಲೆ ಮಾಹಿತಿ ಪಡೆಯುವುದು ಪತ್ರಿಕೋದ್ಯಮವಲ್ಲ ! ಮಾಹಿತಿ ನೀಡಬಯಸುವವರು ಹೇಳಿದ್ದನೆಲ್ಲಾ ಬರೆದುಕೊಳ್ಳುವವನು ಪತ್ರಕರ್ತನಾಗಲಾರ, ಶೀಘ್ರಲಿಪಿಗಾರನಾಗುತ್ತಾನೆ ಎಂದ ರವಿ ಹೆಗಡೆ ಅವರು ಯಾವ ವ್ಯಕ್ತಿ ಯಾವ ವಿಷಯವನ್ನು ಸ್ವ-ಪ್ರೇರಣೆಯಿಂದ ನೀಡಬಯಸುತ್ತಾನೋ ಅದು ಸುದ್ದಿಯಲ್ಲ. ದು ಜಾಹೀರಾತು ಎನಿಸಿಕೊಳ್ಳುತ್ತದೆ ! ಆದರೆ, ಯಾವ ವಿಷಯವನ್ನು ಮುಚ್ಚಿಡಲು ಪ್ರಯತ್ನಿಸುತ್ತಾನೋ ಅದೇ ಸುದ್ದಿ !! ಎಂದು ವ್ಯಾಖ್ಯಾನಿಸಿದರು.

ಅಲ್ಲದೆ. ಅಭಿವ್ಯಕ್ತಿಯಲ್ಲಿ ವಿಶೇಷ ಕೌಶಲ್ಯ, ಭಾಷೆಯ ಮೇಲೆ ಪ್ರಭುತ್ವ, ವಿಷಯ ಪ್ರಸ್ತುತಿಯಲ್ಲಿ ವಿಶೇಷತೆ ಇವೆಲ್ಲದರ ಜೊತೆಗೆ ವಿಶ್ವಾಸಾರ್ಹ ಮಾಹಿತಿ ಮೂಲವನ್ನು ಬೆಳೆಸಿಕೊಂಡರೆ ಮಾತ್ರ ಅತ್ಯುತ್ತಮ ಪತ್ರಕರ್ತರಾಗಲು ಸಾಧ್ಯ ಎಂದ ಅವರು ವೃತ್ತಿ ಜೀವನದ ವಿವಿಧ ಮಜಲುಗಳಲ್ಲಿನ ತಮ್ಮ ಅನುಭವದ ಚಿತ್ರಣವನ್ನು ಅನಾವರಣಗೊಳಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಹಿರಿಯ ಪತ್ರಕರ್ತೆ ಸಿ ಜಿ ಮಂಜುಳಾ ಅವರು ಪ್ರಜಾಪ್ರಭುತ್ವದಲ್ಲಿ ಪತ್ರಿಕೋದ್ಯಮದ ಪ್ರಾಮುಖ್ಯತೆಯನ್ನು ಪರಿಚಯಿಸಿ ಮುಂದಿನ ದಿನಗಳಲ್ಲಿ ಸಾರ್ವಜನಿಕ ಅವಶ್ಯಕತೆಗಳ ಕುರಿತು ಕಾರ್ಯಸೂಚಿ ರೂಪಿಸುವ ವಕಾಲತ್ತು ಪತ್ರಿಕೋದ್ಯಮ ( ಅಜೆಂಡಾ ಸೆಟ್ಟಿಂಗ್ ಅಡ್ವೊಕೆಸಿ ಜರ್ನಲಿಸಂ ) ರೂಪುಗೊಳ್ಳಬೇಕು ಎಂಬುದು ತಮ್ಮ ಅಪೇಕ್ಷೆ ಮತ್ತು ನಿರೀಕ್ಷೆ ಎಂದರು.

ಈ ಮುನ್ನ, ತಮ್ಮ ಸ್ವಾಗತ ಭಾಷಣದಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿಯ ಕಾರ್ಯದರ್ಶಿ ಸಿ ರೂಪ ಅವರು ಕಾರ್ಯಕ್ರಮದ ಆಶಯಗಳನ್ನು ತಿಳಿಸಿದರು.

ಮುಖ್ಯಮಂತ್ರಿಯವರ ಮಾಧ್ಯಮ ಕಾರ್ಯದರ್ಶಿ ಎನ್ ಭೃಂಗೀಶ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪ ನಿರ್ದೇಶಕ ಡಿ ಪಿ ಮುರಳೀಧರ್, ಕರ್ನಾಟಕ ಮಾಧ್ಯಮ ಅಕಾಡೆಮಿಯ ಮಾಜಿ ಅಧ್ಯಕ್ಷ ಎಂ ಸಿದ್ದರಾಜು. ಕರ್ನಾಟಕ ಮದ್ಯಪಾನ ಸಂಯಮ ಮಂಡಳಿಯ ಕಾರ್ಯದರ್ಶಿ ಕೆ ರೋಹಿಣಿ, ಬೆಂಗಳೂರು ವಿಶ್ವವಿದ್ಯಾಲಯದ ವಿದ್ಯುನ್ಮಾನ ಮಾಧ್ಯಮ ವಿಭಾಗದ ಮುಖ್ಯಸ್ಥರಾದ ಡಾ ವಾಹಿನಿ, ಸಹಾಯಕ ಪ್ರಾಧ್ಯಾಪಕರಾದ ಡಾ ಟಿ ಶ್ರೀಪತಿ ಮತ್ತು ಡಾ ಆರ್ ರಾಜೇಶ್ವರಿ, ಸಂವಹನ ಮತ್ತು ಪತ್ರಿಕೋದ್ಯಮ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ ಎನ್ ಸಂಜೀವ್ ರಾಜ್ ಮತ್ತು ಡಾ ಬಿ ಶೈಲಶ್ರೀ ಅವರೂ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

*********
ಡಿ ಪಿ ಎಂ

## ಬಾಯ್ಲರ್ ಸ್ಫೋಟದಲ್ಲಿ ಇಬ್ಬರು ಕಾರ್ಮಿಕರ ಸಾವು :
## ಕಾರ್ಖಾನೆಯ ಮಾಲೀಕರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲು

ಬೆಂಗಳೂರು, ನವೆಂಬರ್ 16 (ಕರ್ನಾಟಕ ವಾರ್ತೆ) :

ಬೆಂಗಳೂರು ನಗರದ ನಾಗಸಂದ್ರ ಬಳಿಯ ದೊಡ್ಡ ಬಿದರಕಲ್ಲು ಪ್ರದೇಶದಲ್ಲಿರುವ ಫೋನಿಕ್ಸ್ ವಾಶ್‌ಟೆಕ್ ಗಾರ್ಮೆಂಟ್ ಕಾರ್ಖಾನೆಯಲ್ಲಿ ಶುಕ್ರವಾರ ಸಂಭವಿಸಿದ ಬಾಯ್ಲರ್ ಸ್ಫೋಟದಲ್ಲಿ ಬಿ. ಸಿ. ಕಂಠಿ ಮತ್ತು ರಮೇಶ್ ಎಂಬ ಇಬ್ಬರು ಕಾರ್ಮಿಕರು ಸಾವನ್ನಪ್ಪಿರುವ ಘಟನೆ ಕುರಿತಂತೆ ಕಾರ್ಖಾನೆ ಮತ್ತು ಬಾಯ್ಲರ್‌ಗಳ ಇಲಾಖೆ ಗಾರ್ಮೆಂಟ್ ಕಾರ್ಖಾನೆಗೆ ನಿಷೇಧಾಜ್ಞೆ ಜಾರಿಗೊಳಿಸಿ ಕಾರ್ಖಾನೆಯ ಮಾಲೀಕರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗಿದೆ.

ಘಟನೆ ಕುರಿತಂತೆ ಸುದ್ದಿ ಮಾಧ್ಯಮಗಳಲ್ಲಿ ಬಿತ್ತರವಾಗುತ್ತಿದ್ದಂತೆಯೇ ಕಾರ್ಖಾನೆ ಮತ್ತು ಬಾಯ್ಲರ್‌ಗಳ,ಕೈಗಾರಿಕಾ ಸುರಕ್ಷತೆ ಮತ್ತು ಆರೋಗ್ಯ ಇಲಾಖೆಯ ಹಿರಿಯ ಅಧಿಕಾರಿಗಳು ಶುಕ್ರವಾರ ರಾತ್ರಿಯೇ ಘಟನಾ ಸ್ಥಳಕ್ಕೆ ಭೇಟಿ ನೀಡಿ ಅವಗಡ ಕುರಿತು ಪ್ರಾಥಮಿಕ ತನಿಖೆ ನಡೆಸಿದ್ದಾರೆ. ಅಲ್ಲದೆ 1948 ರ ಕಾರ್ಖಾನೆಗಳ ಕಾಯಿದೆಯ ಪ್ರಕಾರ ಕಾರ್ಖಾನೆಯಲ್ಲಿ ಉಡುಪು ಒಗೆಯುವ ಘಟಕಕ್ಕೆ ಪರವಾನಗಿ ಪಡೆದಿರಲಿಲ್ಲ. ಅಂತೆಯೇ, 1923 ರ ಬಾಯ್ಲರುಗಳ ಕಾಯಿದೆಯಡಿ ಬಾಯ್ಲರ್‌ನ ನೋಂದಣಿಯಾಗಿರಲಿಲ್ಲ ಬಾಯ್ಲರ್ ಕಾರ್ಯ ನಿರ್ವಹಣೆಯಲ್ಲಿ ಗುಣಮಟ್ಟದ ಕಾರ್ಯನಿರ್ವಹಣಾ ವಿಧಾನವನ್ನು ಅನುಸರಿಸದ ಹಾಗೂ ಅತ್ಯಧಿಕ ಒತ್ತಡದ ಹಿನ್ನೆಲೆಯಲ್ಲಿ ಕಾರ್ಖಾನೆಯಲ್ಲಿನ ಬಾಯ್ಲರ್ ಸ್ಫೋಟಗೊಂಡಿದೆ ಎಂಬ ವಿಚಾರವು ತಪಾಸಣಾ ಸಮಯದಲ್ಲಿ ಬೆಳಕಿಗೆ ಬಂದಿದೆ ಎಂದು ಕಾರ್ಖಾನೆ ಮತ್ತು ಬಾಯ್ಲರುಗಳ ಇಲಾಖೆಯ ಅಪರ ನಿರ್ದೇಶಕ ಟಿ. ಆರ್. ರಮೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

***********

**ಡಿ ಪಿ ಎಂ**

# ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ನವೆಂಬರ್ 16 (ಕರ್ನಾಟಕ ವಾರ್ತೆ) :**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 17-11-2019** ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಶ್ರೀಮತಿ ರಾಜಶ್ರೀ ಹೊಳ್ಳ ಮತ್ತು ತಂಡದವರಿಂದ ಕುಚುಪುಡಿ ನೃತ್ಯ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

- ಬೆಳಿಗ್ಗೆ 8.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ **ಬಾಲಭವನ ಸೊಸೈಟಿ** ಸಹಯೋಗದೊಂದಿಗೆ **"ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ **ರಾಗಿಣಿ ಸಂಗೀತ ನೃತ್ಯಾಲಯ ತಂಡದವರಿಂದ ಸಮೂಹ ನೃತ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

# ಡ್ರಾಯಿಂಗ್ ಲೋಯರ್ ಮತ್ತು ಹೈಯರ್ ಗ್ರೇಡ್ ಪರೀಕ್ಷೆ

**ಬೆಂಗಳೂರು, ನವೆಂಬರ್ 16 (ಕರ್ನಾಟಕ ವಾರ್ತೆ) :**

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ 2019 ನೇ ಸಾಲಿನಲ್ಲಿ ನಡೆಯುವ ಡ್ರಾಯಿಂಗ್ ಲೋಯರ್ ಮತ್ತು ಹೈಯರ್ ಗ್ರೇಡ್ ಪರೀಕ್ಷೆಗಳು ರಾಜ್ಯಾದಾದ್ಯಂತ 243 ಡ್ರಾಯಿಂಗ್ ಗ್ರೇಡ್ ಪರೀಕ್ಷಾ ಕೇಂದ್ರಗಳಲ್ಲಿ ನವೆಂಬರ್ 20 ರಿಂದ 22 ರವರೆಗೆ ನಡೆಯುತದೆ ಎಂದು ಪ್ರಕಟಣೆ ತಿಳಿಸಿದೆ.**